**ಕರ್ನಾಟಕ ಸರ್ಕಾರ**

***ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.***

ಸಂಖ್ಯೆ:ಪಮೂಶಿ/ಶೈಶಾ-04/ದಾ.ಸು-06/2017-18 ದಿನಾಂಕ: 22-07-2017

**ಸುತ್ತೋಲೆ**

ವಿಷಯ: ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ದಂಡ ಶುಲ್ಕದೊಂದಿಗೆ ದಾಖಲಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ.

****

2017-18ನೇ ಶೈಕ್ಷಣಿಕ ಸಾಲಿಗೆ ಪ್ರಥಮ ಪಿಯುಸಿ ತರಗತಿಗೆ ಮಾರ್ಚ್ ತಿಂಗಳಿನಲ್ಲಿ ನಡೆದ ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ದಿನಾಂಕ:25-07-2017ರವರೆಗೆ ದಂಡ ಶುಲ್ಕದೊಂದಿಗೆ ದಾಖಲಾತಿಗೆ ಕೊನೆಯ ದಿನಾಂಕವನ್ನು ತಿಳಿಸಿಲಾಗಿತ್ತು ಹಾಗೂ ಎಸ್ ಎಸ್ ಎಲ್ ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಒಂದು ವಾರದ ವರೆಗೆ ದಾಖಲಾಗಲು ಅನುಮತಿಯನ್ನು ನೀಡಲಾಗಿತ್ತು. ಉಲ್ಲೇಖಿತ ಪತ್ರದಂತೆ ಬಹಳಷ್ಟು ವಿದ್ಯಾರ್ಥಿಗಳು ಸಕಾಲದಲ್ಲಿ ಪ್ರವೇಶ ಪಡೆಯಲು ಸಾಧ್ಯವಾಗಿಲ್ಲದ ಕಾರಣ ಪ್ರವೇಶವನ್ನು ದಿನಾಂಕ: 31-07-2017 ರವರೆಗೆ ಮುಂದೂಡಲು ಉಲ್ಲೇಖಿತ ಪತ್ರದಲ್ಲಿ ಕೋರಿರುತ್ತಾರೆ, ಅದರಂತೆ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ದಾಖಲಾತಿ ದಿನಾಂಕವನ್ನು ಈ ಕೆಳಕಂಡಂತೆ ವಿಸ್ತರಿಸಿ ಆದೇಶಿಸಲಾಗಿದೆ:

| ತರಗತಿ | ವಿಳಂಬ ದಾಖಲಾತಿ ರೂ. 504/- (ಐದುನೂರು ನಾಲ್ಕು) ದಂಡ ಶುಲ್ಕದೊಂದಿಗೆ (ಎರಡೂ ದಿನಗಳು ಸೇರಿವೆ) ದಿನಾಂಕ: 22-07-2017 ರಿಂದ 31-07-2017 ರವರೆಗೆ | ವಿಶೇಷ ದಂಡ ಶುಲ್ಕ ರೂ.2184/-(ರೂ 1680/- ಒಂದು ಸಾವಿರದ ಆರು ನೂರು ಎಂಭತ್ತು + ರೂ:504/- ಐದು ನೂರ ನಾಲ್ಕು ಮಾತ್ರ) ಎರಡೂ ದಿನಗಳು ಸೇರಿವೆ ದಿನಾಂಕ: 22-07-2017 ರಿಂದ 31-07-2017 ರವರೆಗೆ |
|---|---|---|
| ಪ್ರಥಮ ಪಿಯುಸಿ | 2017ರ ಎಸ್ ಎಸ್ ಎಲ್ ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾತ್ರ. | 2017ರ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮಾತ್ರ. |
| ವಿಶೇಷ ಸೂಚನೆ:- ಸೂಚಿತ ದಿನಾಂಕಗಳಲ್ಲಿ ದಾಖಲಾಗುವ ಪ್ರಥಮ ಪಿಯುಸಿ ವಿದ್ಯಾರ್ಥಿಗಳು ವಾರ್ಷಿಕ ಶೇ 75%ರಷ್ಟು ಹಾಜರಾತಿಯನ್ನು ಪಡೆಯುವುದು ಕಡ್ಡಾಯವಾಗಿರುತ್ತದೆ. | | |

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿ

1. ಜಿಲ್ಲಾ ಉಪನಿರ್ದೇಶಕರು,ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಮುಂದಿನ ಕ್ರಮಕ್ಕಾಗಿ
2. ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರು, ಉಪನ್ಯಾಸಕರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕರ ಗಮನಕ್ಕೆ ತರಲು, ಜಿಲ್ಲಾ ಉಪನಿರ್ದೇಶಕರ ಮೂಲಕ ಮುಂದಿನ ಕ್ರಮಕ್ಕಾಗಿ.
3. ಜಂಟಿ ನಿರ್ದೇಶಕರು, (ಪರೀಕ್ಷೆ/ಆಡಳಿತ/ಶೈಕ್ಷಣಿಕ/ ಮಾನ್ಯತೆ/RIDF) ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ..
4. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ
5. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.